| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 49 (82) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | 21.09.2020 |
| 4 | ಉತ್ತರಿಸಬೇಕಾದ ಸಚಿವರು | ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳು ಯಾವವು;(ವಿವರ ನೀಡುವುದು) | ರಾಜ್ಯದಲ್ಲಿ 17 ಸರ್ಕಾರಿ,ಸ್ವಾಯತ್ತ ವೈದ್ಯಕೀಯ ಮಹಾವಿದ್ಯಾಲಯಗಳಿವೆ. ವಿವರವನ್ನು ಅನುಬಂಧದಲ್ಲಿ ನೀಡಿದೆ. |
| (ಆ) | ಈ ಮಹಾ ವಿದ್ಯಾಲಯಗಳಲ್ಲಿ ಪ್ಯಾರಾ ಮೆಡಿಕಲ್ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ; (ಸ್ಟಾಫ್ ನರ್ಸ್,ಟೆಕ್ನಿಷಿಯನ್ ಹಾಗೂ ಇನ್ನಿತರೆ ಸಿಬ್ಬಂದಿಗಳ ಮಾಹಿತಿ ನೀಡುವುದು) | ಅನುಬಂಧದಲ್ಲಿ ಲಗತ್ತಿಸಿದೆ. |
| (ಇ) | ಬಂದಿದ್ದಲ್ಲಿ ಯಾವ, ಯಾವ ಮಹಾವಿದ್ಯಾಲಯಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ.(ವರ್ಗವಾರು ಪೂರ್ಣ ವಿವರ ನೀಡುವುದು) | |
| (ಈ) | ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ:ಎಂಇಡಿ 139 ಆರ್‌ಐ 2020

(ಡಾ|| ಕೆ.ಸುಧಾಕರ್)

ವೈದ್ಯಕೀಯ ಶಿಕ್ಷಣ ಸಚಿವರು

# ಅನುಬಂಧ

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 49(82)

| ಕ್ರಮ ಸಂಖ್ಯೆ | ಸಂಸ್ಥೆಯ ಹೆಸರು | ಖಾಲಿ ಇರುವ ಹುದ್ದೆಗಳು ಖಾಲಿ ಇರುವ ಹುದ್ದೆಗಳ ವಿವರ | | | ಭರ್ತಿ ಮಾಡಲು ಕೈಗೊಂಡಿರುವ ಕ್ರಮ |
|---|---|---|---|---|---|
| | | ಸ್ಟಾಫ್ ನರ್ಸ್ | ಟೆಕ್ನಿಷಿಯನ್ | ಇತರೆ ಸಿಬ್ಬಂದಿ | |
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | 25 | 11 | 130 | ಹಂತ ಹಂತವಾಗಿ ಅವಶ್ಯಕತೆಗೆ ತಕ್ಕಂತೆ ಗುತ್ತಿಗೆ ಆಧಾರದ ಮೇಲೆ ತಾತ್ಕಲಿಕವಾಗಿ ಭರ್ತಿ ಮಾಡಲಾಗುತ್ತಿದೆ. |
| 2 | ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಮೈಸೂರು. | 134 | 30 | 174 | ಗ್ರೂಪ್ ಸಿ ಮತ್ತು ಡಿ ಹುದ್ದೆಗಳನ್ನು ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ವೃಂದಾ & ನೇಮಕಾತಿ ನಿಯಮಗಳನ್ನು ರೂಪಿಸದೇ ಇರುವುದರಿಂದ ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆಗೆ ಸೇರಿದ ಸಿಬ್ಬಂದಿಗಳು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಾರೆ. |
| 3 | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ. | 94 | 34 | 131 | ಖಾಲಿ ಇರುವ 94 ಸ್ಟಾಫ್ ನರ್ಸ ಹುದ್ದೆಗಳಲ್ಲಿ 80 ಜನರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.<br>ಖಾಲಿ ಇರುವ 34 ಟೆಕ್ನಿಷಿಯನ್ ಹುದ್ದೆಗಳಲ್ಲಿ 27 ಜನರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.<br>ಖಾಲಿ ಇರುವ ಇತರೆ ಸಿಬ್ಬಂದಿ ಹುದ್ದೆಗಳಲ್ಲಿ 46 ಜನರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.<br>371 (ಜೆ) ಪ್ರಕಾರ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅಧಿ ಸೂಚನೆಯನ್ನು ಹೊರಡಿಸಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿತ್ತು. ಆದರೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಮ್ 2020, ದಿ:06-07-2020ರ ಪ್ರಕಾರ ಕೋವಿಡ್-19 ಗಂಭೀರ ಪರಿಸ್ಥಿತಿಯಿಂದಾಗಿ ನೇಮಕಾತಿ ಪ್ರಕ್ರಿಯೆಯನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲು ಆದೇಶಿಸಿದ ಪ್ರಯುಕ್ತ ಸದರಿ ನೇಮಕಾತಿ ಪ್ರಕ್ರಿಯೆಯನ್ನು ಮುಂದಿನ ಆದೇಶ ನಿರೀಕ್ಷಿಸಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |
| 4 | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ. | - | - | 65 | ಗ್ರೂಪ್-ಸಿ ಖಾಲಿ ಇರುವ ಹುದ್ದೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಗಣಕಯಂತ್ರರು ಕಾರ್ಯನಿರ್ವಹಿಸುತ್ತಿರುತ್ತಾರೆ. |
| 5 | ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 28 | 28 | 57 | 2017ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮುಖಾಂತರ ಶುಶ್ರೂಷಾ ಸಿಬ್ಬಂದಿಗಳನ್ನು ನೇಮಕಾತಿ ಮಾಡಲಾಗಿದೆ ಹಾಗೂ ಅವಶ್ಯವಿರುವ ಇನ್ನಿತರ ಬೋಧಕೇತರ ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. |

| | | | | | |
|---|---|---|---|---|---|
| 6 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ. | 25 | 54 | 32 | ವಿಮ್ಸ್ ಸಂಸ್ಥೆಯಲ್ಲಿ ಖಾಲಿ ಇರುವ ಪ್ಯಾರ ಮೆಡಿಕಲ್ ಸಿಬ್ಬಂದಿ ಹುದ್ದೆಗಳನ್ನು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. |
| 7 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. | 67 | 05 | 10 | ಹಿಮ್ಸ್ ಸಂಸ್ಥೆಯ ಶುಶ್ರೂಷಕ ಹುದ್ದೆಗಳನ್ನು ನೇರ ನೇಮಕಾತಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ಇವರ ಮೂಲಕ ಮತ್ತು ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗಿದೆ.<br>ಪ್ಯಾರಾ ಮೆಡಿಕಲ್ ಹುದ್ದೆಗಳನ್ನು ನೇರ ನೇಮಕಾತಿಯ ಮುಖಾಂತರ ಭರ್ತಿ ಮಾಡಿಕೊಳ್ಳಲಾಗಿದೆ. |
| 8 | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | 32 | 15 | 101 | ಭರ್ತಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. |
| 9 | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. | 27 | 13 | 00 | ಈಗಾಗಲೇ 24 ಶುಶ್ರೂಷಕರ ಹುದ್ದೆಗಳಿಗೆ ನಿಯಮಾನುಸಾರ ನೇರ ಸಂದರ್ಶನ ಪ್ರಕ್ರಿಯೆ ಪೂರ್ಣಗೊಂಡು ಅಭ್ಯರ್ಥಿಗಳು ಸೇವೆಗೆ ವರದಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. |
| 10 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 65 | 48 | 77 | ಭರ್ತಿಯಾದ ಶುಶ್ರೂಷಕರ ಹುದ್ದೆಯಲ್ಲಿ 27– ಖಾಯಂ ಸಿಬ್ಬಂದಿಗಳು ವರ್ಗಾವಣೆ ಮುಖಾಂತರ , 63– ಸಿಬ್ಬಂದಿಗಳು ಗುತ್ತಿಗೆ ಆಧಾರದ ಮುಖಾಂತರ ಮತ್ತು 100– ಸಿಬ್ಬಂದಿಗಳು ಹೊರಗುತ್ತಿಗೆ ಮುಖಾಂತರ ಭರ್ತಿ ಮಾಡಿಕೊಳ್ಳಲಾಗಿದೆ. |
| 11 | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 106 | 10 | 26 | 40 ಸ್ಟಾಫ್ ನರ್ಸಗಳನ್ನು ಹೊರಗುತ್ತಿಗೆ ಆಧಾರದದಲ್ಲಿ ನೇಮಕ ಮಾಡಿಕೊಳ್ಳಲಾಗಿದೆ. |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು | 0 | 0 | 13 | ಕೆ.ಇ.ಎ ಮೂಲಕ ಭರ್ತಿ ಮಾಡಲು ಈಗಾಗಲೇ ಪತ್ರ ಬರೆಯಲಾಗಿದೆ. |
| 13 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ | 54 | 72 | 67 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಖಾಲಿ ಇರುವ ಸ್ಟಾಫ್ ನರ್ಸ ಹುದ್ದೆಗಳನ್ನು ಕೆ.ಇ.ಎ ಮೂಲಕ ಭರ್ತಿ ಮಾಡಲು ಕೆ.ಇ.ಎ ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಉಳಿದ ಹುದ್ದೆಗಳನ್ನು ಹೊರ ಗುತ್ತಿಗೆ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ |
| 14 | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ | 12 | 0 | 0 | -------- |
| 15 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳಸಂಸ್ಥೆ, ಕೊಪ್ಪಳ | 20 | 10 | 20 | ಕೋವಿಡ್–19 ಅಂಗವಾಗಿ ರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿರುವುದರಿಂದ ಈ ಕೆಳಕಂಡ ಹೆಚ್ಚುವರಿ ಹುದ್ದೆಗಳ ಅವಶ್ಯಕತೆ ಇರುವ ಬಗ್ಗೆ ಈ ಕಾರ್ಯಾಲಯದಿಂದ ದಿ: 18–08–2020 ರಂದು ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಹಾಗೂ ಮಾನ್ಯ ನಿರ್ದೇಶಕರು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು ಇವರಿಗೂ ಸಹ ದಿ: 03--09–2020 ರಂದು ಮೇಲ್ಕಂಡ ಹುದ್ದೆಗಳನ್ನು 6 ತಿಂಗಳ ಕಾಲಾವಧಿಗೆ ಹೊರಗುತ್ತಿಗೆ ಆಧಾರದ ಮೇಲೆ |

| | | | | | |
|---|---|---|---|---|---|
| | | | | | ಭರ್ತಿ ಮಾಡಿಕೊಳ್ಳಲು ಅನುದಾನ ಬಿಡುಗಡೆ ಮಾಡುವಂತೆ ಹಾಗೂ ಅನುಮೋದನೆಗಾಗಿ ಕೋರಲಾಗಿದೆ ಮುಂದುವರೆದು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಜಿಲ್ಲಾಧಿಕಾರಿಗಳು ಕೊಪ್ಪಳ ಇವರಿಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಎಸ್.ಡಿ.ಆರ್.ಎಫ್/ ಡಿ.ಎಂ.ಎಫ್ ಅನುದಾನದ ಅಡಿಯಲ್ಲಿ ವೇತನ ಬಿಡುಗಡೆ ಮಾಡುವಂತೆ ಕೋರಲಾಗಿರುತ್ತದೆ., |
| 16 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ | 101 | 26 | 0 | ಟ್ರಾಮಾಕೇರ್ ಕೇಂದ್ರಕ್ಕೆ 100 ಶುಶ್ರೂಷಕರ ಹುದ್ದೆಗಳು ಮಂಜೂರಾಗಿರುತ್ತವೆ. ಈ ಶುಶ್ರೂಷಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕೋರಿಕೊಳ್ಳಲಾಗಿದೆ.<br>ಕೋವಿಡ್-19 ರೋಗ ಹರಡುವಿಕೆಯಿಂದ ಹಾಗೂ ಶುಶ್ರೂಷಕರ ಸೇವೆಯು ಅವಶ್ಯಕವಾಗಿರುವುದರಿಂದ ಸರ್ಕಾರದ ಕಾರ್ಯದರ್ಶಿಗಳ ಅನುಮೋದನೆಯೊಂದಿಗೆ 100 ಹುದ್ದೆಗಳನ್ನು ಸ್ವೈಚ್ಛಿಕ ಆಧಾರದ ಮೇಲೆ ರೋಸ್ಟರ್ ಹಾಗೂ ಮೆರಿಟ್ ಅನ್ವಯ ನಿಯುಕ್ತಿ ಮಾಡಿಕೊಳ್ಳಲಾಗಿದೆ. |
| 17 | ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ. | 04 | 29 | 00 | ---- |

( ಆ.ಕು.ಪ 139 ಆರ್.ಪಿ 2020 )

B. S. Prashant Kumar